ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತಿದೆ.

ಈ) ಕಾರಂಜಾ ಯೋಜನೆಯನ್ನು 2012–13ನೇ ಸಾಲಿನಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಉ) 131 ಕಿ.ಮೀ. ಬಲದಂಡೆ ಕಾಲುವೆಗಳ ಅಭಿವೃದ್ಧಿಯಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಸೇವೆಯಲ್ಲಿರುವ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ, ನಿವೃತ್ತಿ ಹೊಂದಿರುವ ಅಧಿಕಾರಿಗಳ ವಿರುದ್ಧ ಸಿವಿಲ್ ದಾವೆ ಹೂಡುವ ಪ್ರಕ್ರಿಯೆ ಮತ್ತು ನಿಧನ ಹೊಂದಿರುವ ಅಧಿಕಾರಿಗಳ ವಾರಸುದಾರರ ವಿರುದ್ಧ ಸಿವಿಲ್ ದಾವೆ ಹೂಡುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಸರ್ಕಾರ I.T.I ಕಾಲೇಜು ಸ್ಥಾಪನೆ

377 (723) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :– ಮಾನ್ಯ ಕಾರ್ಮಿಕ ಸಚಿವರು ದಯವಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೀದರ್ ಜಿಲ್ಲೆಯಲ್ಲಿನ ಸರ್ಕಾರಿ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಹೊಸದಾಗಿ ಸರ್ಕಾರಿ ಐ.ಟಿ.ಐ. ಕಾಲೇಜುಗಳನ್ನು ಸ್ಥಾಪಿಸುವ ಯೋಜನೆಯು ಸರ್ಕಾರದ ಮುಂದಿದೆಯೆ;

ಇ) ಹಾಗಿದ್ದಲ್ಲಿ, ಭಾಲ್ಕಿ ಪಟ್ಟಣದಲ್ಲಿ ಸರ್ಕಾರಿ ಐ.ಟಿ.ಐ. ಕಾಲೇಜು ಸ್ಥಾಪಿಸುವ ಯೋಜನೆ ಸರ್ಕಾರಕ್ಕಿದೆಯೇ?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು) :

ಅ) ಬೀದರ್ ಜಿಲ್ಲೆಯಲ್ಲಿ ಒಟ್ಟು 4 ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರಗಳಿರುತ್ತವೆ.

ಆ) ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನಲ್ಲಿ ಹೊಸ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರದ ಮಟ್ಟದಲ್ಲಿ ಇರುವುದಿಲ್ಲ. ಪ್ರಸ್ತುತ ರಾಜ್ಯದಲ್ಲಿ 53 ತಾಲ್ಲೂಕುಗಳಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಈವರೆಗೆ ತೆರೆದಿರುವುದಿಲ್ಲ. ಬೀದರ್ ಜಿಲ್ಲೆಯಲ್ಲಿ ಈಗಾಗಲೇ 4 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು, 6 ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳು ಮತ್ತು 64 ಅನುದಾನ ರಹಿತ ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಈ ತರಬೇತಿ ಕೇಂದ್ರಗಳು ಆ ಭಾಗದ ಯುವಕ ಯುವತಿಯವರಿಗೆ ಕೌಶಲ್ಯ ತರಬೇತಿ ನೀಡಿ ಉದ್ಯೋಗವಕಾಶಗಳನ್ನು ಪಡೆಯಲು ಅವಕಾಶ ಕಲ್ಪಿಸಿದೆ.

ಇ) ಅನುದಾನದ ಲಭ್ಯತೆ ಆಧರಿಸಿ ಹಂತಹಂತವಾಗಿ ಅವಶ್ಯಕತೆಯ ಮೇರೆಗೆ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಅಣೆಕಟ್ಟು ಹಾಗೂ ಏತ ನೀರಾವರಿ ಕಾಮಗಾರಿ

378 (724) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :– ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ದಯವಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭಾಲ್ಕಿ ತಾಲ್ಲೂಕಿನಲ್ಲಿ ಬರುವ ಲಕನಗಾಂವ ಆಣೆಕಟ್ಟು ಹಾಗೂ ನಾಗರಾಳ ಏತ ನೀರಾವರಿ ನಿರ್ಮಾಣ ಕಾರ್ಯವು ಸಂಪೂರ್ಣಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಸಂಪೂರ್ಣಗೊಳ್ಳದೇ ಇರಲು ಕಾರಣವೇನು;

ಇ) ಲಕನಗಾಂವ ಆಣೆಕಟ್ಟು ಹಾಗೂ ನಾಗರಾಳ ಏತ ನೀರಾವರಿ ಕಾರ್ಯವು ಪೂರ್ಣಗೊಳ್ಳಲು ಸರ್ಕಾರ ನಿಗದಿ ಪಡಿಸಿರುವ ಹಣದ ವಿವರ ನೀಡುವುದು ಹಾಗೂ ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ತೀರ್ಮಾನಿಸಲಾಗಿದೆ;

ಈ) ಈ ಎರಡೂ ಕಾಮಗಾರಿಗಳು ವಿಳಂಬವಾಗಲು ಕಾರಣರಾದ ಗುತ್ತಿಗೆದಾರರು ಹಾಗೂ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಗೋವಿಂದ ಎಂ. ಕಾರಜೋಳ (ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ) ಬಂದಿದೆ.

ಆ) ಲಕನಗಾಂವ ಆಣೆಕಟ್ಟಿನ (ಬಿ.ಸಿ.ಬಿ) ಎತ್ತರವನ್ನು 3 ಮೀ. ದಿಂದ 5ಮೀ. ವರೆಗೆ ಹೆಚ್ಚುವರಿಯಾಗಿ ಕೈಗೊಳ್ಳಲಾಗಿದೆ. ಬಿ.ಸಿ.ಬಿ. ಪ್ರಾಪರ್ ಪೂರ್ಣಗೊಂಡಿದೆ. ಅದಕ್ಕೆ ಪೂರಕವಾಗಿ ವಿಂಗ್‌ವಾಲ್ ಹಾಗೂ ರಿಟರ್ನ್‌ವಾಲ್‌ಗಳ ಎತ್ತರಗಳನ್ನು ಹಾಗೂ ಇನ್ನಿತರ ಕೆಲವು ಹೆಚ್ಚುವರಿ ಕೆಲಸಗಳನ್ನು ನಿರ್ವಹಿಸಬೇಕಾಗಿದೆ. ಗುತ್ತಿಗೆದಾರರ ವಿಳಂಬದಿಂದಾಗಿ ಕಾಮಗಾರಿಯು ಭಾಗಶಃ ಉಳಿದಿರುತ್ತದೆ.

ನಾಗರಾಳ ಏತ ನೀರಾವರಿ ಯೋಜನೆ ನಿರ್ಮಾಣ ಕಾಮಗಾರಿಯನ್ನು ನಿರ್ವಹಿಸುವಾಗ ಭೂಮಾಲೀಕರ ಆಕ್ಷೇಪಣೆಯಿಂದ ಕಾಮಗಾರಿ ಪೂರ್ಣ ಗೊಂಡಿರುವುದಿಲ್ಲ. ಪ್ರಸ್ತುತ ಭೂಮಾಲಿಕರಿಗೆ ಪರಿಹಾರಧನ ನೀಡಲಾಗಿದೆ. ತದನಂತರ ಗುತ್ತಿಗೆದಾರರಿಗೆ ಕಾಮಗಾರಿ ಪ್ರಾರಂಭಿಸಲು ಹಲವು ಬಾರಿ ಸೂಚಿಸಿದಾಗ್ಯೂ ಕಾಮಗಾರಿಯನ್ನು